# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ರಾಜಕುಮಾರ್ ಎಂ.ತೊರವಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕ ಪಂಚಾಯತ್, ಇಂಡಿ ರವರ ವಿರುದ್ಧದ ಶಿಸ್ತುಕ್ರಮ ಅಂತಿಮ ಆದೇಶ.

ಓದಲಾಗಿದೆ: ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 6 ವಿಸೇಬಿ 2012 ದಿನಾಂಕ: 11-10-2012.

----

ಪ್ರಸ್ತಾವನೆ:

ಬಿಜಾಪುರ ಜಿಲ್ಲೆಯ, ಇಂಡಿ ತಾಲ್ಲೂಕು ಪಂಚಾಯಿತಿಯಲ್ಲಿ ಈ ಹಿಂದೆ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿರುವ, ಶ್ರೀ ರಾಜಕುಮಾರ್ ಎಂ.ತೊರವಿ ಇವರು ಅಗರಖೇಡ, ಗ್ರಾಮ ಪಂಚಾಯತ್‌ನಲ್ಲಿ ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಅನುಷ್ಠಾನಗೊಂಡಿರುವ ಕಾಮಗಾರಿಗಳ ಭೌತಿಕ ಪರಿಶೀಲನೆ ಮಾಡದಿರುವುದು ಅನುದಾನ ಬಿಡುಗಡೆ ಮಾಡುವ ಮುನ್ನ ಈ ಹಿಂದೆ ಬಿಡುಗಡೆ ಮಾಡಿರುವ ಅನುದಾನ ಸಮರ್ಪಕವಾಗಿ ವಿನಿಯೋಗವಾಗಿದೆಯೇ ~~ಎಂಬ ಬಗ್ಗೆ ಧೃಢೀಕರಣ ಪಡೆಯಕೊಳ್ಳುವುದು.~~ ಗ್ರಾಮ ಪಂಚಾಯಿತಿಗಳ ತಪಾಸಣೆ ಮಾಡಿ ವರದಿ ಸಲ್ಲಿಸದಿರುವುದು ಹಾಗೂ ಇನ್ನಿತರೆ ಆರೋಪಗಳ ಸಂಬಂಧ, ಸದರಿ ಅಧಿಕಾರಿಯ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವನಿಮೇ)ನಿಯಮಾವಳಿಗಳು 1957ರ ನಿಯಮ-11 ರನ್ವಯ ಇಲಾಖಾ ವಿಚಾರಣೆಯನ್ನು ನಡೆಸಲು, ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ನಿವೃತ್ತ ಜಿಲ್ಲಾ ನ್ಯಾಯಾಧೀಶರಾದ ಶ್ರೀ ಡಿ.ವಿ.ಶೇಟ್, ಇವರನ್ನು ವಿಚಾರಣಾಧಿಕಾರಿಯನ್ನಾಗಿ ಮತ್ತು ಬಿಜಾಪುರ ಜಿ.ಪಂ. ನ ಸಹಾಯಕ ಕಾರ್ಯದರ್ಶಿ ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಲಾಗಿತ್ತು. ವಿಚಾರಣಾಧಿಕಾರಿಯು ದಿನಾಂಕ: 19-02-2014 ರಂದು ಸರ್ಕಾರಕ್ಕೆ ಸಲ್ಲಿಸಿರುವ ತಮ್ಮ ಅಂತಿಮ ವಿಚಾರಣಾ ವರದಿಯಲ್ಲಿ ಅಧಿಕಾರಿಯ ವಿರುದ್ಧ ಹೊರಿಸಿರುವ ಒಟ್ಟು 7 ಆರೋಪಗಳು ಸಾಬೀತಾಗಿರುವುದಿಲ್ಲವಾದ್ದರಿಂದ ಅಧಿಕಾರಿಯು ನಿರಪರಾಧಿಯೆಂದು ನಿರ್ಣಯಿಸಿ ಅಭಿಪ್ರಾಯಪಟ್ಟಿರುತ್ತಾರೆ.

ವಿಚಾರಣಾ ವರದಿಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

## ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 6 ವಿಸೇಬಿ 2012, ಬೆಂಗಳೂರು, ದಿನಾಂಕ:07-04-2015

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಇಂಡಿ ತಾಲ್ಲೂಕ ಪಂಚಾಯಿತಿಯಲ್ಲಿ ಈ ಹಿಂದೆ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದ

ಶ್ರೀ ರಾಜಕುಮಾರ್ ಎಂ.ತೊರವಿ ಇವರಿಗೆ "ಎಚ್ಚರಿಕೆ " ಯನ್ನು ನೀಡಿ, ಇವರ ವಿರುದ್ಧದ ಶಿಸ್ತುಕ್ರಮ / ಇಲಾಖಾ ವಿಚಾರಣೆಯನ್ನು ಕೈಬಿಟ್ಟಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿ.ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬಿಜಾಪುರ.
3. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕ ಪಂಚಾಯಿತಿ, ಇಂಡಿ.
4. ಮಾನ್ಯ ಗ್ರಾಅ. & ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
5. ಸಂಬಂಧಿಸಿದ ಅಧಿಕಾರಿಗೆ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ /ಕಾರ್ಯದರ್ಶಿ(ಪಂ.ರಾಜ್)/ಅಪರ ಕಾರ್ಯದರ್ಶಿ (ಆಡಳಿತ), ಗ್ರಾ.ಅ. & ಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
7. ಮೇಲ್ವಿಚಾರಕರು, ಗಣಕ ಕೋಶ, ಗ್ರಾ.ಅ. & ಪಂ.ರಾಜ್ ಇಲಾಖೆ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಎಸ್‌ಬಿಪಿ/-